# ಧನವಿಧೇಯಕಕ್ಕೆ ಮೇಲ್ಮನೆ ಅಂಗೀಕಾರ

ವಿಧಾನ ಪರಿಷತ್ತು



ಮುಂದಿನ ಮೂರು ತಿಂಗಳಿಗೆ ಲೇಖಾನುಧಾನ ಕೋರಿ ಮುಖ್ಯಮಂತ್ರಿ ಯಡಿಯೂರಪ್ಪ ಮಂಡಿಸಿದ ಧನ ವಿನಿಯೋಗ ವಿಧೇಯಕಕ್ಕೆ ಮೇಲ್ಮನೆಯಲ್ಲೂ ಅಂಗೀಕಾರ ದೊರೆಯಿತು.

ಸೋಮವಾರ ವಿಧಾನ ಪರಿಷತ್ ಕಲಾಪ ಸಮಾವೇಶಗೊಳ್ಳುತ್ತಿದಂತೆ ಸಿಎಂ ಯಡಿಯೂರಪ್ಪ ಅವರು ಮುಂದಿನ ಮೂರು ತಿಂಗಳಿಗೆ ಲೇಖಾನುಧಾನ ಕೋರಿ ಧನ ವಿನಿಯೋಗ ವಿಧೇಯಕಕ್ಕೆ ಅಂಗೀಕಾರ ಅನುಮೋದನೆ ನೀಡಲು ಕೋರಿದರು. ಮೇಲ್ಮನೆಯಲ್ಲಿ ಅವಿರೋಧವಾಗಿ ಈ ವಿಧೇಯಕಕ್ಕೆ ಎಲ್ಲ ಸದಸ್ಯರು ಒಪ್ಪಿಗೆ ಸೂಚಿಸಿದರು. ಬಳಿಕ ಸಭಾಪತಿ ಪ್ರತಾಪ್ಚಂದ್ರ ಶೆಟ್ಟಿ ಕಲಾಪವನ್ನು ಅನಿರ್ದಿಷ್ಟಾವಧಿಗೆ ಮುಂದೂಡಿದರು.

ವಿಧೇಯಕ ಕುರಿತು ಚರ್ಚೆ ಆರಂಭಿಸಿದ ವಿಪಕ್ಷದ ಸದಸ್ಯ ಎಸ್.ಆರ್ ಪಾಟೀಲ್, ಮಂದಗತಿಯಿಂದ ಸಾಗಿರುವ ಕೃಷ್ಣಾ ಮೇಲ್ದಂಡೆ ಯೋಜನೆಗೆ ಚುರುಕು ಮುಟ್ಟಿಸಲು ಕ್ರಮ ಕೈಗೊಳ್ಳಬೇಕು. ಆಲಮಟ್ಟಿ ಜಲಾಶಯದ ಎತ್ತರವನ್ನು ಹೆಚ್ಚಿಸಲು ಕೂಡಲೆ ಕ್ರಮ ಕೈಗೊಳ್ಳಬೇಕು. ವಿಶೇಷವಾಗಿ ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಸಿಎಂ ಯಡಿಯೂರಪ್ಪ ಅವರನ್ನು ಮನವಿ ಮಾಡಿದರು.

ವಿಧಾನ ಪರಿಷತ್ ಸದಸ್ಯ ಶ್ರೀಕಂಠಯ್ಯ ಮಾತನಾಡಿ, ಕಾವೇರಿ ನದಿ ನೀರು ವ್ಯರ್ಥವಾಗಿ ಸಮುದ್ರ ಪಾಲಾಗುವುಧನ್ನು ತಪ್ಪಿಸಲು ಮೇಕೆದಾಟು ಯೋಜನೆಗೆ ಡಿಪಿಆರ್ ಸಿದ್ಧಪಡಿಸಲಾಗಿದೆ. ಈ ಯೋಜನೆಗೆ ಕೇಂದ್ರದಿಂದ ಕೂಡಲೆ ಅನುಮತಿ ಪಡೆದುಕೊಳ್ಳಬೇಕು. ಜತೆಗೆ ಕಾವೇರಿ ಕಾಲುವೆಗಳನ್ನು ಆಧುನೀಕರಣಗೊಳಿಸಬೇಕು ಅಲ್ಲದೆ ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳು ಸ್ಥಗಿತಗೊಂಡಿರುವುದರಿಂದ ಕಬ್ಬು ಬೆಳೆಗಾರರು ಸಂಕಷ್ಟದಲ್ಲಿದ್ದಾರೆ. ಕೂಡಲೇ ಸಕ್ಕರೆ ಕಾರ್ಖಾನೆಗಳನ್ನು ಪುನರಾರಂಭಿಸಲು ಸರಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಮುಖ್ಯಮಂತ್ರಿ ಯಡಿಯೂರಪ್ಪ ಮಾತನಾಡಿ, ಶೀಘ್ರದಲ್ಲೇ ಪ್ರಧಾನಿ ಮೋದಿ ಅವರನ್ನು ಭೇಟಿ ಮಾಡಿ ರಾಜ್ಯಕ್ಕೆ ಹೆಚ್ಚಿನ ಅನುದಾನ ತರಲು ಶ್ರಮಿಸುತ್ತೇವೆ. ನೀರಾವರಿಗೆ ನನ್ನ ಮೊದಲ ಆದ್ಯತೆ. ಕೃಷ್ಣ ಮೇಲ್ದಂಡೆ ಯೋಜನೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಅಗತ್ಯ ಹಣ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುವುದು. ಉತ್ತರ ಕರ್ನಾಟಕ, ಹೈದಾರಾಬಾದ್ ಕರ್ನಾಟಕ ಭಾಗದ ಸರ್ವಾಂಗೀಣ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುವುಲುದು. ಶೀಘ್ರದಲ್ಲಿ ಪ್ರತಿ ಪಕ್ಷ ಸದಸ್ಯರನ್ನು ಒಳಗೊಂಡ ನಿಯೋಗವನ್ನು ಪ್ರಧಾನಿ ಬಳಿಗೆ ಕರೆದುಕೊಂಡು ಹೋಗಿ ರಾಜ್ಯದ ಅಭಿವೃದ್ಧಿ ಕುರಿತು ಚರ್ಚಿಸಲಗುವುದು ಎಂದು ಭರವಸೆ ನೀಡಿದರು.

ರಾಜ್ಯದಲ್ಲಿ 70 ರಿಂದ 80 ತಾಲೂಕುಗಳಲ್ಲಿ ಬರಗಾಲ ಆವರಿಸಿದೆ. ಆ.2 ರಂದು ಜಿಲ್ಲಾಧಿಕಾರಿಗಳ ಸಭೆ ಕರೆದು ಚರ್ಚಿಸಿ ಮುಂದಿನ ಕಾರ್ಯಯೋಜನೆಯನ್ನು ರೂಪಿಸಲಾಗುವುದು. ಈ ಹಿಂದೆ ಸಿದ್ದರಾಮಯ್ಯ ಮತ್ತು ಕುಮಾರಸ್ವಾಮಿ ಸರಕಾರಗಳು ಮಾಡಿರುವ ಒಳ್ಳೆಯ ಕೆಲಸವನ್ನು ಮುಂದುವರಿಸುವುದಾಗಿ ತಿಳಿಸಿದರು.

**ಛಲದಂತಕ ಮಲ್ಲರು ನೀವು !:** ಮೈತ್ರಿ ಸರಕಾರವನ್ನು ಬೀಳಿಸಲು ಆರು ಸಲ ಪ್ರಯತ್ನ ಪಟ್ಟು 7 ನೇ ಬಾರಿಗೆ ಯಶ ಕಂಡಿದ್ದೀರಿ. ಒಟ್ಟಾರೆ ಗುರಿ ತಲುಪಿದ್ದೀರಿ. ಅಂದುಕೊಂಡಂತೆ ಸಾಧಿಸುವ ಛಲದಂತಕಮಲ್ಲರು ನೀವು ಎಂದು ವಿಪಕ್ಷದ ಸದಸ್ಯ ಎಸ್.ಆರ್. ಪಾಟೀಲ್ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಅಭಿನಂದಿಸಿದರು.

ಆಡಳಿತ ಪಕ್ಷ ಮದವೇರಿದ ಆನೆಯಂತೆ. ಪ್ರತಿಪಕ್ಷ ಮಾವುತನಂತೆ ಹಿಡಿತದಲ್ಲಿ ಹಿಡಿದುಕೊಳ್ಳಲು ಪ್ರಯತ್ನ ಮಾಡುತ್ತಲೇ ಇರಬೇಕಾಗುತ್ತದೆ. ರಾಜ್ಯದ ಅಭಿವೃದ್ಧಿ ಪರ ಕೆಲಸ ಮಾಡಿ. ನಿಮ್ಮ ಅಭಿವೃದ್ಧಿ ಕೆಲಸಗಳಿಗೆ ನಮ್ಮ ಬೆಂಬಲವೂ ಇರಲಿದೆ. ಒಟ್ಟಾರೆ ಜನರ ಕಲ್ಯಾಣಕ್ಕಾಗಿ ಕೆಲಸ ಮಾಡಿ ಉತ್ತಮ, ಸುಭದ್ರ ಆಡಳಿತ ನೀಡಬೇಕು. 2008ರಲ್ಲಿ ನಿಮ್ಮನ್ನು ಅಧಿಕಾರದಿಂದ ಕೆಳಗಿಳಿಸಿದ್ದು ನಿಮ್ಮವರೇ. ನಿಮ್ಮ ಅಕ್ಕಪಕ್ಕದವರ ಕುರಿತು ಎಚ್ಚರಿದಿಂದರಬೇಕು ಎಂದು ಸಲಹೆ ನೀಡಿದರು.

ಮೇಲ್ಮನೆ ಸದಸ್ಯ ಬಸವರಾಜ ಹೊರಟ್ಟಿ ಮಾತನಾಡಿ, ನನ್ನದ ರಾಜಕೀಯ ಜೀವನದಲ್ಲಿ ಇದುವರೆಗೂ 17 ಮುಖ್ಯಮಂತ್ರಿಗಳನ್ನು ಕಂಡಿದ್ದೇನೆ. ಈ ಪೈಕಿ ನಾಲ್ಕು ಬಾರಿ ನೀವೇ ಸಿಎಂ ಆಗಿ ಕಾರ್ಯ ನಿರ್ವಹಣೆ ಮಾಡಿದ ಅನುಭವ ಇದೆ. ಮುಖ್ಯಮಂತ್ರಿಗಳಿಗೆ ಜವಾಬ್ದಾರಿ ಜತೆಗೆ ಸರಕಾರ ಮುನ್ನಡೆಸುವ ಒತ್ತಡವೂ ಇರುತ್ತದೆ. ಪಕ್ಷಪಾತ ಬಿಟ್ಟು ಎಲ್ಲರೂ ಜತೆಗೂಡಿ ರಾಜ್ಯದ ಅಭಿವೃದ್ಧಿ ಮಾಡೋಣ. ಎಲ್ಲರೂ ಮೆಚ್ಚುವ ಸುಭದ್ರ ಸರಕಾರ ನೀಡಿ. ದೇವರು ನಿಮಗೆ ಆಯುಷಾರೋಗ್ಯ ನೀಡಲಿ ಎಂದು ಆಶಿಸಿದರು.